## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ.ಎನ್.ಎಂ.ಕೃಷ್ಣಮೂರ್ತಿ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು-ಇವರನ್ನು ನಿಲಂಬನೆಯಲ್ಲಿರಿಸುವ ಬಗ್ಗೆ.

ಓದಲಾಗಿದೆ:

ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಡಿಟಿಇ 08 ಡಿಇಕ್ಯೂ (1) 2014/1834, ದಿನಾಂಕ: 07-09-2015.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ಶ್ರೀ.ಎನ್.ಎಂ.ಕೃಷ್ಣಮೂರ್ತಿ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು-ಇವರು ಕರ್ತವ್ಯದಲ್ಲಿ ನಿರ್ಲಕ್ಷ್ಯತೆಯನ್ನು ತೋರುವುದು, ಅನಧಿಕೃತವಾಗಿ ಕರ್ತವ್ಯಕ್ಕೆ ಗೈರುಹಾಜರಾಗುವುದು, ಸಂಸ್ಥೆಯ ಆಡಳಿತಾತ್ಮಕ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸದೇ ಸಂಸ್ಥೆಯ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಮತ್ತಿತರ ದಾಖಲೆಪತ್ರಗಳಿಗೆ ಸಹಿಯನ್ನು ಪಡೆಯಲು ತೊಂದರೆಯುಂಟುಮಾಡುತ್ತಿರುವುದು, ಬೋಧನಾಕಾರ್ಯವನ್ನು ಸರಿಯಾಗಿ ನಿರ್ವಹಿಸದಿರುವುದು ಹಾಗೂ ತಾವು ಗೈರುಹಾಜರಾಗಿದ್ದ ದಿನಗಳಗೂ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿರುವುದು-ಇವೇ ಮೊದಲಾದ ವಿಷಯಗಳನ್ನು ಕುರಿತು ಸಂಸ್ಥೆಯ ವಿದ್ಯಾರ್ಥಿಗಳು ಹಾಗೂ ಪೋಷಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಈ ಬಗ್ಗೆ ಪೂರ್ವಭಾವಿಯಾಗಿ ಪರಿಶೀಲಿಸಲು ಶ್ರೀ.ಆರ್.ಮಂಜುನಾಥ್., ಜಂಟಿ ನಿರ್ದೇಶಕರು (ಪರೀಕ್ಷೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-ಇವರ ನೇತೃತ್ವದಲ್ಲಿ ತನಿಖಾತಂಡವನ್ನು ತನಿಖೆಗಾಗಿ ಸದರಿ ಸಂಸ್ಥೆಗೆ ಕಳುಹಿಸಲಾಗಿತ್ತು.

ಶ್ರೀ.ಆರ್.ಮಂಜುನಾಥ್., ನೇತೃತ್ವದ ತನಿಖಾತಂಡವು ದಿನಾಂಕ: 19.08.2015ರಂದು ಸದರಿ ಸಂಸ್ಥೆಗೆ ಭೇಟಿನೀಡಿ ಸ್ಥಳತನಿಖೆ ನಡೆಸಿ, ಶ್ರೀ.ಎನ್.ಎಂ.ಕೃಷ್ಣಮೂರ್ತಿ., ರವರ ವಿರುದ್ಧ ಸ್ವೀಕೃತವಾಗಿರುವ ದೂರುಗಳು ಸತ್ಯವೆಂದು ಕಂಡುಬರುತ್ತಿರುವುದಾಗಿ ತಮ್ಮ ತನಿಖಾ ವರದಿಯಲ್ಲಿ ತಿಳಿಸಿರುವುದರಿಂದ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1966ರ ಸಾಮಾನ್ಯ ನಿಯಮ 3(1) (i) (ii) & (iii) ಮತ್ತು ನಿಯಮ 21 ಹಾಗೂ ನಿಯಮ 24 ಅನ್ನು ಉಲ್ಲಂಘಿಸಿರುವ ಆರೋಪಕ್ಕೆ ಒಳಗಾಗಿದ್ದು, ಕರ್ತವ್ಯದಲ್ಲಿ ಸತ್ಯ, ನಿಷ್ಠೆ ಮತ್ತು ಶ್ರದ್ಧೆಯನ್ನು ತೋರುವುದರಲ್ಲಿ ವಿಫಲರಾಗಿ ಒಬ್ಬ ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ಉದ್ಧಟತನದಿಂದ, ಅಗೌರವದಿಂದ ವರ್ತಿಸಿರುತ್ತಾರೆ. ಸದರಿಯವರು 'ಎ' ವೃಂದದ ಸರ್ಕಾರಿ ಅಧಿಕಾರಿಯಾಗಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮ 10(1)ರಡಿಯಲ್ಲಿ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ನಿಲಂಬನೆಯಲ್ಲಿರಿಸುವ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸಬೇಕೆಂದು ಹಾಗೂ ಸಂಸ್ಥೆಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮೀಪದ ಸರ್ಕಾರಿ ಪಾಲಿಟೆಕ್ನಿಕ್, ಚಿಂತಾಮಣಿಯಲ್ಲಿ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ.ಟಿ.ಜಯತೀರ್ಥ., ರವರನ್ನು ತಾತ್ಕಾಲಿಕವಾಗಿ ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು-ಇಲ್ಲಿಗೆ ಪ್ರಾಂಶುಪಾಲರನ್ನಾಗಿ ನಿಯೋಜಿಸಿ ಆದೇಶಿಸಬೇಕೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರು ತಮ್ಮ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ತಾಂತ್ರಿಕ ಶಿಕ್ಷಣ ನಿರ್ದೇಶಕರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 185 ಡಿಟಿಇ 2015,**
**ಬೆಂಗಳೂರು, ದಿನಾಂಕ: 05ನೇ ಡಿಸೆಂಬರ್ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಶ್ರೀ.ಎನ್.ಎಂ.ಕೃಷ್ಣಮೂರ್ತಿ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು-ಇವರು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯತೆಯನ್ನು